# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 314(2305)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಕೃಷಿ ಸಚಿವರು

ವಿಷಯ : ಕೀಟನಾಶಕ ಮತ್ತು ರಸಗೊಬ್ಬರಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ

(ಅ) ಹೆಚ್ಚು ಇಳುವರಿ ಪಡೆಯುವ ಉದ್ದೇಶದಿಂದ ರೈತರು ಹೆಚ್ಚಿನ ಪ್ರಮಾಣದಲ್ಲಿ ಕೀಟನಾಶಕ ಮತ್ತು ರಸಗೊಬ್ಬರಗಳನ್ನು ಬಳಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಅಧಿಕ ಪ್ರಮಾಣದಲ್ಲಿ ರಸಗೊಬ್ಬರ ಮತ್ತು ಕ್ರಿಮಿನಾಶಕಗಳನ್ನು ಬಳಸಿ ಬೆಳೆಯುವ ಬೆಳೆಗಳಿಂದ ಉತ್ಪಾದನೆಯಾದ ಆಹಾರ ಪದಾರ್ಥಗಳನ್ನು ಸೇವಿಸುವುದರಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮಗಳು ಉಂಟಾಗುವುದಿಲ್ಲವೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಜನರ ಆರೋಗ್ಯದ ದೃಷ್ಟಿಯಿಂದ ಕೀಟನಾಶಕ ಮತ್ತು ರಸಗೊಬ್ಬರದ ಬಳಕೆ ಬಗ್ಗೆ ರೈತರಿಗೆ ತಿಳುವಳಿಕೆ ನೀಡಲು ಸರ್ಕಾರದ ವತಿಯಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳೇನು?